**Bangalore**
**Regional News**
**09.06.2026 / 18.40 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ವಿಧಾನಪರಿಷತ್ ಚುನಾವಣೆ; ಎಂಟು ಅಭ್ಯರ್ಥಿಗಳ ನಾಮಪತ್ರ ಮಾನ್ಯ; ನಾಡಿದ್ದು ನಾಮಪತ್ರ ಹಿಂಪಡೆಯಲು ಕೊನೆಯ ದಿನ
2. ಮುಜರಾಯಿ ಇಲಾಖೆ ದೇವಾಲಯಗಳ ನಿರ್ವಹಣೆಯನ್ನು ಮತ್ತಷ್ಟು ಸುಧಾರಿಸುವಂತೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂಚನೆ
3. ಬಿಜೆಪಿ–ಜೆಡಿಎಸ್ ಮೈತ್ರಿಗೆ ಬಿರುಕು ತರಲು ಕಾಂಗ್ರೆಸ್ ಯತ್ನ– ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪ
4. ಬೆಂಗಳೂರು – ತುಮಕೂರು ರೈಲ್ವೆ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ಕೇಂದ್ರ ಸಚಿವ ವಿ.ಸೋಮಣ್ಣ
5. ಕಾರವಾರ – ಮಡ್ಗಾಂವ್ ರೈಲು ಸೇವೆ ಇನ್ನು ಮುಂದೆ ಖಾಯಂ; ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸ್ಪಷ್ಟನೆ

<><><><><><>

ವಿಧಾನಸಭೆಯ ಸದಸ್ಯರಿಂದ ವಿಧಾನಪರಿಷತ್‌ಗೆ ನಡೆಯುವ ಏಳು ಸ್ಥಾನಗಳ ಚುನಾವಣೆಗೆ ಸಲ್ಲಿಕೆಯಾಗಿರುವ 8 ಅಭ್ಯರ್ಥಿಗಳ ನಾಮಪತ್ರ ಪುರಸ್ಕೃತಗೊಂಡಿವೆ. ಜೆ.ಡಿ.ಎಸ್ ನ ಗೋವಿಂದರಾಜು, ಬಿಜೆಪಿಯ ರಘು.ಆರ್, ಲಿಂಗರಾಜ್ ಪಾಟೀಲ್, ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್, ಶಿವಣ್ಣ.ಬಿ.ಎಸ್, ವಿನಯ್ ಕಾರ್ತಿಕ್, ಪಿ.ವಿ.ಮೋಹನ್, ತಿಪ್ಪಣ್ಣಪ್ಪ ಕಮಕನೂರ ಅವರ ನಾಮಪತ್ರಗಳು ಮಾನ್ಯಗೊಂಡಿವೆ ಎಂದು ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದೇ 11 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಯಾರೊಬ್ಬರು ನಾಮಪತ್ರ ಹಿಂಪಡೆಯದಿದ್ದರೆ, ಇದೇ 18 ರಂದು ಮೇಲ್ಮನೆ ಸದಸ್ಯತ್ವಕ್ಕೆ ಮತದಾನ ನಡೆಯಲಿದೆ.

<><><><><><>

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ವಿಧಾನಸೌಧದಲ್ಲಿ ಇಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಮುಜರಾಯಿ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಗ್ರಾಮೀಣ ಮತ್ತು ಪಾರಂಪರಿಕ ಕ್ರೀಡೆಗಳಿಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಯುವಕರಿಗೆ ಉತ್ತೇಜನ ನೀಡಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ, ಮುಜರಾಯಿ ಇಲಾಖೆಯ ಆಡಳಿತಾತ್ಮಕ ವಿಚಾರಗಳ ಕುರಿತು ಸಮಗ್ರವಾಗಿ ಪರಿಶೀಲನೆ ನಡೆಸಿದ ಅವರು, ಇಲಾಖೆಗೆ ಒಳಪಡುವ ದೇವಸ್ಥಾನಗಳ ನಿರ್ವಹಣೆ, ಭಕ್ತರಿಗೆ ಒದಗಿಸಲಾಗುತ್ತಿರುವ ಸೌಕರ್ಯಗಳು ಹಾಗೂ ಇಲಾಖೆಯ ಕಾರ್ಯಕ್ಷಮತೆಯನ್ನು ಮತ್ತಷ್ಟು ಸುಧಾರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

<><><><><><>

ಬಿಜೆಪಿ–ಜೆಡಿಎಸ್ ಮೈತ್ರಿಗೆ ಬಿರುಕು ತರಲು ಕಾಂಗ್ರೆಸ್ ಯತ್ನಿಸುತ್ತಿದೆ ಎಂದು ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಮಂಡ್ಯ ತಾಲೂಕಿನ ತಗ್ಗಹಳ್ಳಿ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವೇಗೌಡರ ಬಗ್ಗೆ ಕಾಂಗ್ರೆಸ್ಸಿಗರಿಗೆ ಈಗ ಅನುಕಂಪ ಬಂದಿದೆ ಎಂದು ತಿಳಿಸಿದ್ದಾರೆ.

ದೇವೇಗೌಡರು ಸ್ವಾಭಿಮಾನಕ್ಕೆ ಧಕ್ಕೆಯಾದಾಗ ಪ್ರಧಾನಿ ಸ್ಥಾನವನ್ನೇ ತ್ಯಜಿಸಿದ್ದರು ಎಂದು ಹೇಳಿದ್ದಾರೆ.

ಇದೇ ವೇಳೆ, ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿರುವುದರಿಂದ ಒಕ್ಕಲಿಗ ಸಮುದಾಯದ ಮತದಲ್ಲಿ ಯಾವುದೇ ವ್ಯತ್ಯಾಸವಾಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><><>

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ, ಇಂದು ಬೆಂಗಳೂರು ಹಾಗೂ ತುಮಕೂರು ಸುತ್ತಮುತ್ತ ರೈಲ್ವೆ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಮುಖ್ಯ ಆಡಳಿತಾಧಿಕಾರಿ ಅಜಯ್ ಶರ್ಮಾ ಹಾಗೂ ನೈಋತ್ಯ ರೈಲ್ವೆ ನಿರ್ಮಾಣ ವಿಭಾಗದ ಹಿರಿಯ ಅಧಿಕಾರಿಗಳೊಂದಿಗೆ ಬೆಂಗಳೂರು ಮತ್ತು ತುಮಕೂರು ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಹಾಗೂ ಪ್ರಸ್ತಾವಿತ ರೈಲ್ವೆ ಮೂಲಸೌಕರ್ಯ ಯೋಜನೆಗಳ ಪ್ರಗತಿ ಪರಿಶೀಲಿಸಿದರು.

ಈ ಯೋಜನೆಗಳ ಮಹತ್ವ ಉಲ್ಲೇಖಿಸಿದ ಸಚಿವರು, ಬೆಂಗಳೂರು ಮತ್ತು ತುಮಕೂರು ಪ್ರದೇಶಗಳಲ್ಲಿ ಸುಧಾರಿತ ರೈಲು ಸಂಪರ್ಕವು ಕೈಗಾರಿಕಾ ಬೆಳವಣಿಗೆ, ವಾಣಿಜ್ಯ ಚಟುವಟಿಕೆಗಳು ಹಾಗೂ ಒಟ್ಟಾರೆ ಪ್ರಾದೇಶಿಕ ಅಭಿವೃದ್ಧಿಗೆ ಉತ್ತೇಜನ ನೀಡಲಿದೆ ಎಂದು ತಿಳಿಸಿದ್ದಾರೆ.

ಎಲ್ಲಾ ಯೋಜನೆಗಳನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸುವುದು ಪ್ರಮುಖ ಆದ್ಯತೆಯಾಗಿದ್ದು, ಯಾವುದೇ ವಿಳಂಬವಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><><><>

ಕಾರವಾರ ಮತ್ತು ಮಡಗಾಂವ್ ನಡುವೆ ಸಂಚರಿಸುತ್ತಿದ್ದ ವಿಶೇಷ ರೈಲನ್ನು ಇನ್ನು ಮುಂದೆ ಖಾಯಂ ಸೇವೆಯನ್ನಾಗಿ ಪರಿವರ್ತಿಸಲು ರೈಲ್ವೆ ಮಂಡಳಿ ಆದೇಶ ಹೊರಡಿಸಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

ಈ ರೈಲು ಎಸಿ, ಸ್ಲೀಪರ್ ಮತ್ತು ಸಾಮಾನ್ಯ ದರ್ಜೆಯ ಬೋಗಿಗಳನ್ನು ಒಳಗೊಂಡ ಒಟ್ಟು 14 ಬೋಗಿಗಳೊಂದಿಗೆ ಸಂಚರಿಸಲಿದೆ.

ಈ ಭಾಗದ ಜನಸಾಮಾನ್ಯರಿಗೆ, ಉದ್ಯೋಗಿಗಳಿಗೆ, ಪ್ರವಾಸಿಗರಿಗೆ ಹಾಗೂ ಆರೋಗ್ಯ ಸೇವೆಗಾಗಿ ಗೋವಾಕ್ಕೆ ತೆರಳುವ ರೋಗಿಗಳಿಗೆ ಅತ್ಯಂತ ಉಪಯುಕ್ತವಾಗಲಿರುವ ಈ ಖಾಯಂ ರೈಲು ಸೇವೆಯ ಸೌಲಭ್ಯವನ್ನು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸದುಪಯೋಗಪಡಿಸಿಕೊಳ್ಳಬೇಕೆಂದು ಸಂಸದ ಕಾಗೇರಿ ಮನವಿ ಮಾಡಿದ್ದಾರೆ.

<><><><><>

ಬಿಟ್ ಕಾಯಿನ್ ಪ್ರಕರಣದಲ್ಲಿ ಶಾಸಕ ಎನ್ಎ ಹ್ಯಾರಿಸ್ ಪುತ್ರ ಮೊಹಮ್ಮದ್ ನಲಪಾಡ್‌ಗೆ ಜಾರಿ ನಿರ್ದೇಶನಾಲಯ, ಮೂರನೇ ನೋಟಿಸ್ ನೀಡಲು ಸಿದ್ಧತೆ ನಡೆಸಿದೆ.

ಬಿಟ್‌ಕಾಯಿನ್‌ಗಳನ್ನು ಭಾರತೀಯ ಕರೆನ್ಸಿಗೆ ಅಕ್ರಮವಾಗಿ ಪರಿವರ್ತಿಸುವ ಮೂಲಕ ನಲಪಾಡ್ ಖಾತೆಗೆ ಕೋಟ್ಯಂತರ ರೂಪಾಯಿ ರವಾನಿಸಲಾಗಿದೆ. ಜೊತೆಗೆ ಹ್ಯಾಕರ್ ಶ್ರೀಕಿಯೊಂದಿಗೆ ಅಕ್ರಮವಾಗಿ ಬಿಟ್‌ಕಾಯಿನ್‌ಗಳನ್ನು ಪಡೆದು, ನಗದು

ರೂಪದಲ್ಲಿ ಪರಿವರ್ತಿಸಿದ ಆರೋಪವು ಕೇಳಿಬಂದಿದೆ. ಈ ಹಿಂದೆ ಇಡಿ ಅಧಿಕಾರಿಗಳು ಶಾಸಕ ಎಂ.ಎ.ಹ್ಯಾರಿಸ್ ಹಾಗೂ ಮೊಹಮ್ಮದ್ ನಲಪಾಡ್ ಅವರ ನಿವಾಸಗಳ ಮೇಲೆ ದಾಳಿ ನಡೆಸಿ, ಸಾಕ್ಷಿಗಳನ್ನು ವಶಪಡಿಸಿಕೊಂಡಿದ್ದಾರೆ.

ಈಗಾಗಲೇ ಎರಡು ಬಾರಿ ನೋಟಿಸ್ ನೀಡಿದ್ದರೂ ಮೊಹಮ್ಮದ್ ನಲಪಾಡ್ ವಿಚಾರಣೆಗೆ ಹಾಜರಾಗಿಲ್ಲ.

<><><><><><><>

ಮೈಸೂರಿನ ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾಲಯ ಸೇರಿದಂತೆ ವಿವಿಧ ಸಿ.ಎಸ್.ಐ.ಆರ್ ಸಂಸ್ಥೆಗಳ ಸಹಯೋಗದಲ್ಲಿ ಇದೇ 13 ರಂದು ಬೆಂಗಳೂರಿನ ವಿ ಎಂ ಗಾಡ್ಕೆ ಕನ್ವೆನ್ಷನ್ ಸಭಾಂಗಣದಲ್ಲಿ 'ರೈಸ್ ಕಾನ್ಕ್ಲೇವ್–2026' ಆಯೋಜಿಸಲಾಗಿದೆ.

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭೂ ವಿಜ್ಞಾನಗಳ ಖಾತೆಯ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದು ಸಿ.ಎಫ್.ಟಿ.ಆರ್.ಐ ನಿರ್ದೇಶಕ ಡಾ.ಗಿರಿಧರ್ ಪರ್ವತಮ್ ಮೈಸೂರಿನಲ್ಲಿ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ 'ವಿಕಸಿತ ಭಾರತ 2047'ರ ದೃಷ್ಟಿಕೋನದಡಿ ಈ ಸಮ್ಮೇಳನವನ್ನು ಆಯೋಜಿಸಲಾಗಿದ್ದು, ಸಂಶೋಧನೆ, ಕೈಗಾರಿಕೆ, ನವೋದ್ಯಮ ಮತ್ತು ಉದ್ಯಮಶೀಲತೆಗೆ ಉತ್ತೇಜನ ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ. ಸಂಪೂರ್ಣ ಸರ್ಕಾರ, ಸಂಪೂರ್ಣ ಸಮಾಜ ಹಾಗೂ ಸಂಪೂರ್ಣ ವಿಜ್ಞಾನ ಮತ್ತು ನವೋದ್ಯಮ ಎಂಬ ಪರಿಕಲ್ಪನೆಯಡಿ ಈ ಸಮಾವೇಶ ನಡೆಯಲಿದೆ.

ವೈಜ್ಞಾನಿಕ ಸಂಶೋಧನೆಗಳನ್ನು ವಾಣಿಜ್ಯ ಉತ್ಪನ್ನಗಳಾಗಿ ಪರಿವರ್ತಿಸಲು ಮತ್ತು ಯುವ ನವೋದ್ಯಮಿಗಳಿಗೆ ಸೂಕ್ತ ಪರಿಸರ ವ್ಯವಸ್ಥೆ ನಿರ್ಮಿಸಲು ಇದು ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

<><><><><><><>

ರೈತರ ಕೃಷಿ ಭೂಮಿಯ ಸಂರಕ್ಷಣೆ, ಮಣ್ಣಿನ ಫಲವತ್ತತೆ ಕಾಪಾಡುವಿಕೆ ಹಾಗೂ ಸುಸ್ಥಿರ ಕೃಷಿ ಪದ್ಧತಿಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಹಮ್ಮಿಕೊಂಡಿರುವ 'ಖೇತ್ ಬಚಾವೋ ಅಭಿಯಾನ'ಕ್ಕೆ ಗದಗದಲ್ಲಿ ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಇಂದು ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಕೃಷಿ ದೇಶದ ಆರ್ಥಿಕತೆಯ ಬೆನ್ನೆಲುಬಾಗಿದ್ದು, ಕೃಷಿ ಭೂಮಿಯ ಸಂರಕ್ಷಣೆ ಹಾಗೂ ಮಣ್ಣಿನ ಆರೋಗ್ಯ ಕಾಪಾಡುವಿಕೆ ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ರೈತರು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಮಣ್ಣಿನ ಪರೀಕ್ಷೆ, ನೀರಿನ ಸಮರ್ಪಕ ಬಳಕೆ ಹಾಗೂ ಸಾವಯವ ಮತ್ತು ನೈಸರ್ಗಿಕ ಕೃಷಿ ಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

<><><><><><><>

ಚುನಾವಣಾ ಆಯೋಗದ ನಿರ್ದೇಶನದಂತೆ ಮಂಡ್ಯ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯ ಮ್ಯಾಪಿಂಗ್ ಕಾರ್ಯವು ಈಗಾಗಲೇ ಶೇಕಡಾ 96.59 ಪ್ರಗತಿಯನ್ನು ಕಂಡಿದ್ದು, ಉಳಿದ ಬಾಕಿ ಮ್ಯಾಪಿಂಗ್ ಅನ್ನು ಶೀಘ್ರವೇ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಕಾರ್ಯವನ್ನು ಯಶಸ್ವಿಗೊಳಿಸಲು ಮತ್ತು ಆರೋಗ್ಯಯುತ ಮತದಾರರ ಪಟ್ಟಿಯನ್ನು ಅಂತಿಮಗೊಳಿಸುವಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><><><><><>

ಇನ್ನು ಹವಾವರ್ತಾಮಾನ...

ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು.  ಕರಾವಳಿ ಕರ್ನಾಟಕದ ಹೆಚ್ಚಿನ ಸ್ಥಳಗಳಲ್ಲಿ ಹಾಗೂ ಒಳನಾಡಿನ ಹಲವೆಡೆ ಮಳೆಯಾಗಿದೆ.

ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ನಿರಂತರ ಗಾಳಿಯೊಂದಿಗೆ ಭಾರೀ ಮಳೆಯಾಗಲಿದೆ. ಕೊಡಗು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳ ಹಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡು ಜಿಲ್ಲೆಗಳಾದ ಬೆಳಗಾವಿ, ಬಾಗಲಕೋಟೆ, ವಿಜಯಪುರ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><><><><><>

ಸಂಕ್ಷಿಪ್ತ ಸುದ್ದಿಗಳು

1. ಕೃಷಿ ಬಳಕೆಯ ಸಬ್ಸಿಡಿ ಯೂರಿಯಾ ರಸಗೊಬ್ಬರವನ್ನು ಅಕ್ರಮವಾಗಿ ಬಳಸಿಕೊಂಡು ನಕಲಿ ಡಿಇಎಫ್ ಆಯಿಲ್ ತಯಾರಿಸುತ್ತಿದ್ದ ಘಟಕದ ಮೇಲೆ ದಾಳಿ ನಡೆಸಿರುವ ಚಿಕ್ಕಬಳ್ಳಾಪುರ ಉಪವಿಭಾಗಾಧಿಕಾರಿ ಮತ್ತು ಕೃಷಿ ಇಲಾಖೆ ಜಾಗೃತ ದಳದ ಅಧಿಕಾರಿಗಳ ತಂಡ 216 ಚೀಲ ಯೂರಿಯಾ ಗೊಬ್ಬರವನ್ನು ಜಪ್ತಿ ಮಾಡಿದ್ದಾರೆ.
2. ಎಸ್.ಐ.ಆರ್. ಸಂಬಂಧ ಜನರು ಮತದಾನದ ಹಕ್ಕು ಕಳೆದುಕೊಳ್ಳಲು ಅವಕಾಶ ನೀಡದಂತೆ ಒತ್ತಾಯಿಸಿ ಕೋಲಾರ ಜಿಲ್ಲಾಧಿಕಾರಿ ಎಂ.ಆರ್ ರವಿ ಅವರಿಗೆ ಜಿಲ್ಲೆಯ ರೈತ ಸಂಘ, ಕಾರ್ಮಿಕ ಸಂಘಟನೆಗಳು ಸೇರಿದಂತೆ ವಿವಿಧ ಜನಪರ ಸಂಘಟನೆಗಳು ಮನವಿ ನೀಡಿ ಒತ್ತಾಯಿಸಿದರು.

________ ಮುಕ್ತಾಯ ________